ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಸಹಕಾರ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು 33 ವರ್ಷ ಕಳೆದರೂ ತಿದ್ದುಪಡಿ ಮಾಡದಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

93 (758) ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸಹಕಾರ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗೆ ಡಿಪಿಎಆರ್, ಡಿಪಿಎಲ್ ಮತ್ತು ಹಣಕಾಸು ಇಲಾಖೆಗಳು ಅಭಿಪ್ರಾಯ ಸಲ್ಲಿಸಿದ್ದರೂ ಸಹ ಅಂತಿಮ ತಿದ್ದುಪಡಿ ನಿಯಮ ಪ್ರಕಟಿಸದಿರಲು ಕಾರಣವೇನು; ಯಾವ ಕಾರಣದಿಂದ ವಿಳಂಬವಾಗುತ್ತಿದೆ; (ಪೂರ್ಣ ವಿವರಗಳನ್ನು ನೀಡುವುದು)

(ಆ) ಜೇಷ್ಠತೆಯಲ್ಲಿ ಹಿರಿಯ ಸಿಡಿಓಗಳನ್ನು ಕೈ ಬಿಟ್ಟು ಕಿರಿಯವರಾಗಿರುವವರಿಗೆ ನಿಬಂಧಕರ ಹುದ್ದೆಗೆ ಮುಂಬಡ್ತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ಕಾರ ಈ ಬಗ್ಗೆ ಪರಿಶೀಲಿಸಿ ತೆಗೆದುಕೊಂಡ ಕ್ರಮಗಳೇನು; (ಪೂರ್ಣ ವಿವರಗಳನ್ನು ನೀಡುವುದು)

(ಇ) ಯಾವ ಕಾಲಮಿತಿಯೊಳಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ತಿದ್ದುಪಡಿಯನ್ನು ಪೂರ್ಣಗೊಳಿಸಲಾಗುವುದು;

(ಈ) ದಿನಾಂಕ 17-8-2017ರ ಕೆ.ಎ.ಟಿ. ಬೆಂಗಳೂರು ಆದೇಶವನ್ನು ಅನುಷ್ಠಾನಗೊಳಿಸಲು ತಹಲ್‌ವರೆವಿಗೆ ಕೈಗೊಂಡಿರುವ ಕ್ರಮಗಳೇನು? (ವಿವರಗಳನ್ನು ನೀಡುವುದು)